1. ರಾಜ್ಯದಲ್ಲಿ ಏಡ್ಸ್ ರೋಗಕ್ಕೆ ತುತ್ತಾದವರ ಸಂಖ್ಯೆ ಎಷ್ಟು?

2. ಏಡ್ಸ್ ರೋಗ ನಿವಾರಣೆಗೋಸ್ಕರ ರಾಜ್ಯ ಸರ್ಕಾರದವರು ಕೈಗೊಂಡಿರುವ ಕಾರ್ಯಕ್ರಮಗಳೇನು? (ವಿವರ ನೀಡುವುದು)

ಡಾ. ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

1. ರಾಜ್ಯದಲ್ಲಿ 1996 ರ ಜೂನ್ ಅಂತ್ಯದವರೆಗೆ 48 ಮಂದಿ ಏಡ್ಸ್ ರೋಗದಿಂದ ಸತ್ತಿರುತ್ತಾರೆ.

2. ಏಡ್ಸ್ ರೋಗದ ನಿಯಂತ್ರಣಕ್ಕಾಗಿ ರಾಜ್ಯ ಸರ್ಕಾರವು ಭಾರತ ಸರ್ಕಾರದ ರಾಷ್ಟ್ರೀಯ ಏಡ್ಸ್ ನಿಯಂತ್ರಣ ಸಂಸ್ಥೆಯ ಮಾರ್ಗಸೂಚಿಯಂತೆ, ರಾಷ್ಟ್ರೀಯ ಏಡ್ಸ್ ನಿಯಂತ್ರಣ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿದೆ. ಏಡ್ಸ್ ರೋಗ ನಿಯಂತ್ರಣಕ್ಕಾಗಿ ಮುನ್ನೆಚ್ಚರಿಕೆ ಕೈಗೊಳ್ಳಲು 3 (ಮೂರು) ಏಡ್ಸ್ ಸಮೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಈ ಕೇಂದ್ರಗಳಲ್ಲಿ ಹೆಚ್.ಐ.ವಿ. ಸೋಂಕಿನ ಪತ್ತೆಗೆ ಪರೀಕ್ಷೆ ಹಾಗೂ ಸೋಂಕಿನ ಪರಿಮಾಣವನ್ನು ತಿಳಿಯಲು ಸಮೀಕ್ಷೆಗಳನ್ನು ನಡೆಸಲಾಗುತ್ತಿದೆ. ರಕ್ತ ಸುರಕ್ಷತೆಗಾಗಿ (ಹತ್ತು) 10 ವಲಯ ರಕ್ತ ತಪಾಸಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಎಲ್ಲ ರಕ್ತ ತಪಾಸಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಎಲ್ಲ ರಕ್ತ ನಿಧಿ ಕೇಂದ್ರಗಳನ್ನು ಏಡ್ಸ್ ಸೋಂಕು ಪರೀಕ್ಷೆಗಾಗಿ ವಲಯ ರಕ್ತ ತಪಾಸಣಾ ಕೇಂದ್ರಕ್ಕೆ ಜೋಡಣೆ ಮಾಡಲಾಗಿದೆ. ರಾಜ್ಯದಲ್ಲಿರುವ ಒಟ್ಟು 42 ರಕ್ತ ನಿಧಿ ಕೇಂದ್ರಗಳನ್ನು ಹಂತ ಹಂತವಾಗಿ ಆಧುನೀಕರಿಸಲಾಗುತ್ತಿದೆ. ರಾಜ್ಯದಲ್ಲಿ ಹಿರಿಯ ಆಸ್ಪತ್ರೆಗಳ, ಜಿಲ್ಲಾ ಆಸ್ಪತ್ರೆಗಳ ಹಾಗೂ ತಾಲ್ಲೂಕು ಮಟ್ಟದ ಆಸ್ಪತ್ರೆಗಳ ಒಟ್ಟು 24 ಲೈಗಿಂಕ ಚಿಕಿತ್ಸಾಲಯಗಳನ್ನು ಬಲವರ್ದನೆ ಮಾಡಲಾಗಿದೆ. ಮತ್ತು ಚಿಕಿತ್ಸೆಯ ಜೊತೆಗೆ ಸುರಕ್ಷಿತ ಲೈಂಗಿಕತೆ ಬಗ್ಗೆ ತಿಳಿವಳಿಕೆ ನೀಡಲಾಗುತ್ತಿದೆ.

ಏಡ್ಸ್ ನಿಯಂತ್ರಣದ ಬಗ್ಗೆ ಮಾಹಿತಿ ನೀಡಲು ಸಮೂಹ ಮಾಧ್ಯಮ ಸಂಪರ್ಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲಾ ಆಸ್ಪತ್ರೆಗಳಲ್ಲಿ ಸಮರ್ಪಕವಾಗಿ ಸಂಸ್ಕರಣೆ ಮಾಡಿದ ಸೂಜಿ, ಸಿರಿಂಜ್‌ಗಳನ್ನು ಮತ್ತು ಉಪಕರಣಗಳನ್ನು ಬಳಸಲು ಸೂಚಿಸಲಾಗಿದೆ.

ವಿಷಯ :- ಖಾಸಗೀ ಕಾಲೇಜುಗಳಲ್ಲಿ ದೊಡ್ಡ ಪ್ರಮಾಣದ ಮೊತ್ತವನ್ನು ದಾನ ಶುಲ್ಕವಾಗಿ ವಸೂಲು ಮಾಡುತ್ತಿರುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 745 (966)

ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಪದವಿ ಪೂರ್ವ ತರಗತಿಗಳಿಗೆ ಸೇರ್ಪಡೆಗೊಳಿಸುವ ಸಂದರ್ಭದಲ್ಲಿ ಖಾಸಗಿ ಕಾಲೇಜುಗಳು ದೊಡ್ಡ ಪ್ರಮಾಣದ ಮೊತ್ತವನ್ನು ದಾನ ಶುಲ್ಕವಾಗಿ ಬೇರೆ ಬೇರೆ ಹೆಸರಿನಲ್ಲಿ ವಸೂಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ತಮ್ಮ ವಿದ್ಯಾಸಂಸ್ಥೆಯಲ್ಲಿಯೇ ಪ್ರೌಢಶಿಕ್ಷಣ ಪಡೆದಿರುವ ವಿದ್ಯಾರ್ಥಿಗಳಿಗೆ ಪಿ.ಯು.ಸಿ. ಪ್ರವೇಶಕೊಡದೆ ಅನ್ಯ ವಿದ್ಯಾರ್ಥಿಗಳಿಗೆ ಪ್ರವೇಶ ಕೊಡುವ ಬಗ್ಗೆ ಸರ್ಕಾರ ದವರ ಗಮನಕ್ಕೆ ಬಂದಿದೆಯೇ?

ಇ) ಈ ವಿಷಯದಲ್ಲಿ ಬಹಳಷ್ಟು ಸಂಖ್ಯೆಯ ಬಡ ವಿದ್ಯಾರ್ಥಿಗಳು ಮತ್ತು ಮಧ್ಯಮ ಆರ್ಹತೆಯ ವಿದ್ಯಾರ್ಥಿಗಳ ವಿದ್ಯಾಭ್ಯಾಸದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ವಿಷಯದಲ್ಲಿ ಸರ್ಕಾರದವರು ಕೂಡಲೆ ಕ್ರಮ ಕೈಗೊಳ್ಳುವರೇ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :-

ಅ) ಬಂದಿಲ್ಲ.

ಆ) ಅಂತಹ ದೂರುಗಳು ಸರ್ಕಾರಕ್ಕೆ ಬಂದಿಲ್ಲ.

ಇ) ಅ. ಮತ್ತು ಆ. ನಲ್ಲಿ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ವಿಷಯ :- ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಸಮವಸ್ತ್ರ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 746 (1074)

ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ 1996-97 ನೇ ಸಾಲಿನಲ್ಲಿ ಸಮವಸ್ತ್ರಗಳನ್ನು ವಿತರಿಸಲಾಗಿದೆಯೆ?

ಆ) ಹಾಗಿದ್ದಲ್ಲಿ ಯಾವ ಯಾವ ತರಗತಿಗಳಿಗೆ ಯಾವ ಮಾನ ದಂಡದಲ್ಲಿ ಹಂಚಲಾಗಿದೆ?

ಇ) ಈಗಾಗಲೇ ಕೆಲವು ಶಾಲೆಗಳು ಈ ಸವಲತ್ತಿನಿಂದ ವಂಚಿತರಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಬಂದಿದ್ದರೆ ಕಾರಣಗಳೇನು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :-

ಅ) ಇಲ್ಲ.

ಆ) 1 ನೇ ತರಗತಿಯಿಂದ 7 ನೇ ತರಗತಿಯವರೆಗೆ ಓದುತ್ತಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಎಲ್ಲಾ ಹೆಣ್ಣುಮಕ್ಕಳಿಗೆ ಹಾಗೂ 1 ರಿಂದ 4 ನೇ ತರಗತಿಯವರೆಗೆ ಓದುತ್ತಿರುವ ಎಲ್ಲಾ ಗಂಡು ಮಕ್ಕಳಿಗೂ 5 ನೇ ತರಗತಿಯಿಂದ 7 ನೇ ತರಗತಿಯವರೆಗೆ ಓದುತ್ತಿರುವ ಎಲ್ಲಾ ಪರಿಶಿಷ್ಟ ಜಾತಿ ಪಂಗಡದ ಗಂಡು ಮಕ್ಕಳಿಗೆ ಸಮವಸ್ತ್ರವನ್ನು ವಿತರಿಸಲು ಉದ್ದೇಶಿಸಿದೆ. ಇನ್ನೂ ಹಂಚಲಾಗಿಲ್ಲ.

ಇ) ಇನ್ನೂ ಯಾರಿಗೂ ಹಂಚದೇ ಇರುವ ಪ್ರಯುಕ್ತ ಕೆಲವು ಶಾಲೆಗಳು ವಂಚಿತವಾಗಿವೆ. ಎಂಬ ಪ್ರಶ್ನೆ ಇಲ್ಲ.

ಈ) ಮೇಲಿನಂತೆ.